ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 31.01.2018

ಸಂಖ್ಯೆ:ಕಾಶಿಇ:ಶೈವಿ:61:ನಿಮ್ಹಾನ್ಸ್- ತರಬೇತಿ/2017-18

# ಸುತ್ತೋಲೆ

ವಿಷಯ: "ಜೀವನ ಕೌಶಲ್ಯ ತರಬೇತಿ"ಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರ ಪತ್ರ ಸಂಖ್ಯೆ:ಯುಸೇಇ/ರಾಸೇಯೋ/ನಿಮ್ಹಾನ್ಸ್/ 2017-18/68 ದಿನಾಂಕ:20.05.2017.

* * * * * * * *

2017-18ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ, ರಾಜ್ಯ ಕೋಶ ಹಾಗೂ ನಿಮ್ಹಾನ್ಸ್ ಸಹಯೋಗದೊಂದಿಗೆ ಎನ್.ಎಸ್.ಎಸ್. ಯೋಜನಾಧಿಕಾರಿಗಳ ಮೂಲಕ ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ **"ಜೀವನ ಕೌಶಲ್ಯ"** ತರಬೇತಿಯನ್ನು ದಿನಾಂಕ:19.02.2018 ರಿಂದ 24.02.2018 ರವರೆಗೆ ಆಯೋಜಿಸಲಾಗಿರುತ್ತದೆ. ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಕನಿಷ್ಠ ಒಬ್ಬರು ಅಧ್ಯಾಪಕರಾದರೂ ಈ ತರಬೇತಿಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.

ಆದ್ದರಿಂದ ಬೆಂಗಳೂರು, ಮೈಸೂರು ಮತ್ತು ಮಂಗಳೂರು ಪ್ರಾದೇಶಿಕ ಕಛೇರಿ ವ್ಯಾಪ್ತಿಯಲ್ಲಿ ಸದರಿ ತರಬೇತಿ ಪಡೆಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ತಲಾ ಒಬ್ಬರು ಅಧ್ಯಾಪಕರನ್ನು ನಿಯೋಜಿಸಲು ಅನುಕೂಲವಾಗುವಂತೆ ಅಧ್ಯಾಪಕರ ಹೆಸರು, ಪದನಾಮ, ಮೊಬೈಲ್ ಸಂಖ್ಯೆ, ಇ-ಮೇಲ್ ವಿಳಾಸ ಇವುಗಳನ್ನು ದಿನಾಂಕ:09.02.2018 ರಂದು ಸಂಜೆ 5:00 ಗಂಟೆಯೊಳಗಾಗಿ ಈ ಕಛೇರಿಯ ಇ-ಮೇಲ್ ವಿಳಾಸ : dceekar.sports@gmail.com ಗೆ ಕಡ್ಡಾಯವಾಗಿ ಕಳುಹಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು ಮತ್ತು ಮಂಗಳೂರು.
2. ಬೆಂಗಳೂರು, ಮೈಸೂರು ಮತ್ತು ಮಂಗಳೂರು ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾ.ತಂ. ಅಧಿಕಾರಿ, ಕಾ.ಶಿ.ಆ. ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ಗೆ ಅಳವಡಿಸಲು.
4. ಶ್ರೀ ಶ್ರೀಕಾಂತ್, ಸಮನ್ವಯಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
5. ಕಛೇರಿ ಪ್ರತಿ